ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 09/03/2020

ದೆಹಲಿಯಲ್ಲಿ ನಿಧನ | ಇಂದು ಅಂತ್ಯಸಂಸ್ಕಾರ | ಪ್ರಧಾನಿ ಮೋದಿ, ಸೋನಿಯಾ, ರಾಹುಲ್ ಸಂತಾಪ

# ಮಾಜಿ ರಾಜ್ಯಪಾಲ ಭಾರದ್ವಾಜ್ ಇನ್ನಿಲ್ಲ

9-3-2020



■ ವಿಜಯವಾಣಿ ಸುದ್ದಿಜಾಲ ನವದೆಹಲಿ

ವಯೋಸಹಜ ಆರೋಗ್ಯ ಸಮಸ್ಯೆಗಳಿಗೆ ತುತ್ತಾಗಿದ್ದ ಕರ್ನಾಟಕದ ಮಾಜಿ ರಾಜ್ಯಪಾಲ ಮತ್ತು ಕೇಂದ್ರದ ಮಾಜಿ ಕಾನೂನು ಸಚಿವ ಹಂಸರಾಜ್ ಭಾರದ್ವಾಜ್ ದೆಹಲಿಯಲ್ಲಿ ಭಾನುವಾರ ನಿಧನರಾಗಿದ್ದಾರೆ.

ಪಂಜಾಬಿನ ರೋಹ್ತಕ್‌ನಲ್ಲಿ 1937ರಲ್ಲಿ ಜನಿಸಿದ್ದ ಭಾರದ್ವಾಜ್, ಆರಂಭದಲ್ಲಿ ರೋಹ್ತಕ್‌ನಲ್ಲೇ ಕಾನೂನು ಅಭ್ಯಾಸ ಮಾಡುತ್ತಾ ವಕೀಲಿ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದರು. 1982ರಲ್ಲಿ ಮೊದಲ ಬಾರಿಗೆ ರಾಜ್ಯಸಭೆ ಸದಸ್ಯರಾಗಿ ನೇಮಕಗೊಂಡಿದ್ದ ಅವರು, 1984ರಿಂದ 89, 1992ರಿಂದ 96 ಮತ್ತು 2004ರಿಂದ 2009ರ ತನಕ ಕಾನೂನು ಸಚಿವರಾಗಿದ್ದರು. ಈ ಮೂಲಕ ಅತ್ಯಂತ ಸುದೀರ್ಘ ಅವಧಿಗೆ ಕಾನೂನು ಖಾತೆ ನಿರ್ವಹಿಸಿದ ಖ್ಯಾತಿ ಗಳಿಸಿದ್ದರು.

ನೇರ, ನಿಷ್ಠುರ ಮಾತುಗಳಿಂದಲೇ ರಾಜಕೀಯ ವಲಯದಲ್ಲಿ ಸುದ್ದಿಯಾಗುತ್ತಿದ್ದ ಭಾರದ್ವಾಜ್, ಜೂನ್ 25, 2009ರಿಂದ 28 ಜೂನ್, 2014 ಅವಧಿಯಲ್ಲಿ ಕರ್ನಾಟಕದಲ್ಲಿ ರಾಜ್ಯಪಾಲರಾಗಿದ್ದಾಗಲೂ ಆಡಳಿತಶಾಹಿ ಹಾಗೂ ಅಧಿಕಾರಶಾಹಿ ವಿರುದ್ಧ ಬಹಿರಂಗ ಟೀಕೆ ಮಾಡುತ್ತಿದ್ದರು. ಸಾಂವಿಧಾನಿಕ ಹುದ್ದೆಯಲ್ಲಿದ್ದಾಗಲೂ ಮಾಧ್ಯಮಗಳಿಂದ ದೂರವಿರಲಿಲ್ಲ.

ಬಿಜೆಪಿಯ ಬಿ.ಎಸ್.ಯಡಿಯೂರಪ್ಪನವರ ವಿರುದ್ಧ ಅಕ್ರಮ ಜಮೀನು ಡಿನೋಟಿಫಿಕೇಷನ್ ಮತ್ತು ಅಕ್ರಮ ಗಣಿಗಾರಿಕೆ ಆರೋಪಗಳ ಬಗ್ಗೆ ಲೋಕಾಯುಕ್ತ ತನಿಖೆಗೆ ಅನುಮತಿ ನೀಡಿದ್ದ ಹಂಸರಾಜ್ ಭಾರದ್ವಾಜ್, ಕಾಂಗ್ರೆಸ್ ಪಕ್ಷದ ನಾಯಕನಂತೆ ವರ್ತಿಸುತ್ತಿದ್ದಾರೆ ಎಂಬ ಟೀಕೆಗೆ ಗುರಿಯಾಗಿದ್ದರು. ಯಡಿಯೂರಪ್ಪ ನೇತೃತ್ವದ ಸರ್ಕಾರಕ್ಕೆ ಬಹುಮತವಿಲ್ಲ. ಹೀಗಾಗಿ ಕರ್ನಾಟಕದಲ್ಲಿ ರಾಷ್ಟ್ರಪತಿ ಆಳ್ವಿಕೆ ಹೇರಬೇಕು ಎಂದು 2011 ಗೃಹ ಸಚಿವಾಲಯಕ್ಕೆ ಸಲ್ಲಿಸಿದ್ದ ಶಿಫಾರಸು ರಾಜಕೀಯ ವಲಯದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸಿತ್ತು. ಈ ಹಿನ್ನೆಲೆಯಲ್ಲಿ ಅಂದಿನ ಪ್ರಧಾನಿ ಡಾ.ಮನಮೋಹನ್ ಸಿಂಗ್ ನಿವಾಸದಲ್ಲಿ ರಾಜಕೀಯ ವ್ಯವಹಾರಗಳ ಕ್ಯಾಬಿನೆಟ್ ಸಮಿತಿ ಸಭೆ ಕರೆಯಲಾಗಿತ್ತು. ಈ ಸಭೆಯಲ್ಲಿದ್ದ ಗೃಹ ಸಚಿವ ಪಿ. ಚಿದಂಬರಂ ಈ ಶಿಫಾರಸನ್ನು ಒಪ್ಪಲು ಸಾಧ್ಯವಿಲ್ಲ ಎಂದು ಅಭಿಪ್ರಾಯ ನೀಡಿದ್ದ ಹಿನ್ನೆಲೆಯಲ್ಲಿ ರಾಜ್ಯಪಾಲರ ಶಿಫಾರಸನ್ನು ತಿರಸ್ಕರಿಸಲಾಗಿತ್ತು. ಇದು ಭಾರದ್ವಾಜ್‌ಗೆ ಅತೀವ ಮುಜುಗರ ಉಂಟು ಮಾಡಿತ್ತಾದರೂ, ಬಿಜೆಪಿ ಸರ್ಕಾರದ ವಿರುದ್ಧ ಸಮರವನ್ನು ಮಾತ್ರ ನಿಲ್ಲಿಸಿರಲಿಲ್ಲ.

2011ರಲ್ಲಿ ಕನ್ನಡದ ಹಿರಿಯ ಸಾಹಿತಿ ಚಿದಾನಂದ ಮೂರ್ತಿ ಅವರಿಗೆ ಬೆಂಗಳೂರು ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ನೀಡಲು ಮುಂದಾಗಿದ್ದಾಗ ಭಾರದ್ವಾಜ್ ಅದನ್ನು ತಡೆ ಹಿಡಿದಿದ್ದರು. 2008ರಲ್ಲಿ ಚರ್ಚ್ ದಾಳಿಗಳ ಕುರಿತ ನ್ಯಾ. ಬಿ.ಕೆ. ಸೋಮಶೇಖರ್ ಆಯೋಗದ ವರದಿಗಳನ್ನು ಚಿದಾನಂದ ಮೂರ್ತಿ ಬೆಂಬಲಿಸಿದ್ದು ಭಾರದ್ವಾಜ್‌ಗೆ ಹಿಡಿಸಿರಲಿಲ್ಲ. ಆದರೆ, 2011ರ ಕನ್ನಡ ಸಾಹಿತ್ಯ ಸಮ್ಮೇಳನವು ರಾಜ್ಯಪಾಲರ ನಿರ್ಧಾರದ ವಿರುದ್ಧ ನಿರ್ಣಯ ತೆಗೆದುಕೊಂಡ ಹಿನ್ನೆಲೆಯಲ್ಲಿ ತಮ್ಮ ಪಟ್ಟನ್ನು ಸಡಿಲಿಸಿದ್ದ ಭಾರದ್ವಾಜ್, ಬೆಂಗಳೂರು ವಿವಿ ಸಿಂಡಿಕೇಟ್ ಸದಸ್ಯರ ಶಿಫಾರಸುಗಳ ಪ್ರಕಾರ ಗೌರವ ಡಾಕ್ಟರೇಟ್ ನೀಡಲು ಸಮ್ಮತಿಸಿದ್ದರು. 2012ರಿಂದ 2013ರ ತನಕ ಭಾರದ್ವಾಜ್ ಕೇರಳದ ರಾಜ್ಯಪಾಲರಾಗಿದ್ದರು. ಅದಾದ ಬಳಿಕ ರಾಜಕಾರಣಕ್ಕೇನೂ ವಾಪಸಾಗಲಿಲ್ಲ. 2013ರ ಬಳಿಕ ಅವರು ತಮ್ಮ ಮಕ್ಕಳು, ಮೊಮ್ಮಕ್ಕಳೊಂದಿಗೆ ದೆಹಲಿಯಲ್ಲೇ ವಾಸ್ತವ್ಯ ಹೂಡಿದ್ದರು. ಸೋಮವಾರ ದೆಹಲಿಯ ನಿಗಮ್ ಬೋಧ್ ಘಾಟ್ ನಲ್ಲಿ ಅಂತಿಮ ಸಂಸ್ಕಾರ ನಡೆಯಲಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

**ಸಂತಾಪ:** ಎಚ್.ಆರ್. ಭಾರದ್ವಾಜ್ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ, ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿ ಮತ್ತು ಸಂಸದ ರಾಹುಲ್ ಗಾಂಧಿ, ಮಾಜಿ ರಾಷ್ಟ್ರಪತಿ ಪ್ರಣಬ್ ಮುಖರ್ಜಿ ಸಂತಾಪ ವ್ಯಕ್ತಪಡಿಸಿದ್ದಾರೆ.

ನಾಲು, ಜನರ